ಶಿಬಿರ, ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ, ಕೌಶಲ್ಯಾಭಿವೃದ್ಧಿ ತರಬೇತಿ, ತಾಂತ್ರಿಕ ವೃತ್ತಿಗಳಲ್ಲಿ ತರಬೇತಿ ಮತ್ತು ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ (ಪಿಎಂಇಜಿಪಿ) ಯೋಜನೆಯ ಮೂಲಕ ಸಾಲ ಸೌಲಭ್ಯವನು ಕಲ್ಪಿಸುವುದರ ಜೊತೆಗೆ ಶೇಕಡ 15 ರಿಂದ 35ರವರೆಗೆ ಸಹಾಯಧನ ಒದಗಿಸಲಾಗುತ್ತಿದೆ. ಈ ಮೂಲಕ ಯುವಕರು ಸಣ್ಣ ಕೈಗಾರಿಕಾ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಪಿಸಲಾಗುತ್ತಿದೆ.

2014–15ನೇ ಸಾಲಿನ ಆಯವ್ಯಯದ ಮಂಡನೆಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಮೂಲಕ ಹೊಸ ಯೋಜನೆಯಾದ ಗ್ರಾಮೀಣ ಪ್ರದೇಶದಲ್ಲಿ 10 ಲಕ್ಷಗಳ ಮೊತ್ತದವರೆಗೆ ಬಂಡವಾಳ ಹೂಡಿ, 1,000 ಸೂಕ್ಷ್ಮ ಗೃಹ ಕೈಗಾರಿಕೆಗಳನ್ನು ಸ್ಥಾಪಿಸುವಂತೆ ಮಾಡಿ, ಯುವಕ/ಯುವತಿಯರು ಸ್ವಯಂ ಉದ್ಯೋಗ ಕೈಗೊಳ್ಳುವಂತೆ ಉತ್ತೇಜಿಸಲು ಚಾಲ್ತಿಯಲ್ಲಿರುವ ವಿವಿಧ ಕಾರ್ಯಕ್ರಮಗಳು ಹಾಗೂ ಹಣಕಾಸು ಸಂಸ್ಥೆಗಳ ಸಂಯೋಜನೆ ಮಾಡಿ ಅನುಷ್ಠಾನಗೊಳಿಸಲು ಘೋಷಿಸಿದ್ದು ಅದರಂತೆ ಕ್ರಮಕೈಗೊಳ್ಳಲಾಗುತ್ತಿದೆ.

ಶಿಗ್ಗಾಂವ್ ತಾಲ್ಲೂಕಿನ ಬಂಕಾಪುರದಲ್ಲಿ ಕಿಲಾರಿ ತಳಿ ಮತ್ತು ನವಿಲು ಧಾಮ

90(83) ಶ್ರೀ ಕೋಳಿವಾಡ ಕೆ.ಬಿ. :– ಮಾನ್ಯ ಕಾನೂನು, ನ್ಯಾಯ,, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶು ಸಂಗೋಪನಾ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹಾವೇರಿ ಜಿಲ್ಲೆಯ ಶಿಗ್ಗಾಂವ್ ತಾಲ್ಲೂಕಿನ ಬಂಕಾಪುರದಲ್ಲಿ ಕಿಲಾರಿ ತಳಿ ಹಾಗೂ ನವಿಲು ಧಾಮ ಇರುವುದು ಸರ್ಕಾರದ ಗಮನದಲ್ಲಿದೆಯೇ; ಈ ಧಾಮಕ್ಕೆ ಕಳೆದ 3 ವರ್ಷಗಳಿಂದ , ಪ್ರತಿ ವರ್ಷ ಎಷ್ಟು ಹಣ ಖರ್ಚಾಗಿದೆ ;

(ಆ) ಈ ಹಣ ದುರುಪಯೋಗವಾಗಿರುವ ಆಪಾದನೆಯಿದ್ದು, ಇದರ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

ಶ್ರೀ ಟಿ.ಬಿ. ಜಯಚಂದ್ರ :– (ಮಾನ್ಯ ಕಾನೂನು, ನ್ಯಾಯ, ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು)

(ಅ) ಹೌದು ಹಾವೇರಿ ಜಿಲ್ಲೆಯ ಶಿಗ್ಗಾಂವ್ ತಾಲ್ಲೂಕಿನ ಬಂಕಾಪುರದಲ್ಲಿ ಪಶುಪಾಲನಾ ಇಲಾಖೆಯ ಕಿಲಾರಿ ತಳಿ ಸಂವರ್ಧನಾ ಕೇಂದ್ರ ಕಾರ್ಯ ನಿರ್ವಹಿಸುತ್ತಿದ್ದು ಹಾಗೂ ನವಿಲು ಧಾಮವು ಅರಣ್ಯ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿದೆ.

ಕಿಲಾರಿ ತಳಿ ಸಂವರ್ಧನಾ ಕೇಂದ್ರ, ಬಂಕಾಪುರಕ್ಕೆ ಕಳೆದ 3 ವರ್ಷಗಳಲ್ಲಿ ಪಶುಪಾಲನಾ ಇಲಾಖಾ ವತಿಯಿಂದ ಬಿಡುಗಡೆಯಾದ ಮತ್ತು ಖರ್ಚಾದ ವಂಟನ ವಿವರ ಈ ಕೆಳಕಂಡಂತೆ ಇರುತ್ತದೆ.

(₹. ಲಕ್ಷಗಳಲ್ಲಿ)

ಕ್ರ. ಸಂ.	ಕಾರ್ಯಕ್ರಮ	ವರ್ಷ					
		2011–12		2012–13		2013–14	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
1	ಕಾಮಗಾರಿಗಳ ನಿರ್ವಹಣೆ	24.00	24.00	18.00	18.00	20.00	20.00
2	ಕ್ಷೇತ್ರದ ನಿರ್ವಹಣೆಗಾಗಿ	32.35	30.36	45.88	45.72	51.41	49.81

ನವಿಲು ಧಾಮವು ಅರಣ್ಯ ಇಲಾಖೆಯ ಅಧೀನದಲ್ಲಿರುವುದರಿಂದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖಾ ವತಿಯಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

(ಆ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖಾ ವತಿಯಿಂದ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ ಮತ್ತು ಕ್ಷೇತ್ರ ನಿರ್ವಹಣೆಯ ವೆಚ್ಚಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999, ನಿಯಮ 2000 ಅನ್ವಯ ಹಾಗೂ ಸರ್ಕಾರದ ನಿಯಮಾವಳಿಗಳ ಅನುಸಾರ ಮಾಡಲಾಗಿದ್ದು, ಯಾವುದೇ ಅನುದಾನ, ದುರುಪಯೋಗವಾಗಿಲ್ಲದಿರುವುದರಿಂದ ಸರ್ಕಾರದಿಂದ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಜಾನುವಾರು ರೋಗ ನಿಯಂತ್ರಣಕ್ಕೆ ಚೆಕ್ ಪೋಸ್ಟ್ ನಿಗಾ ಘಟಕ ಸ್ಥಾಪನೆ

91(235) ಶ್ರೀ ಕ್ಯಾತ್ಸಂದ್ರ ಎನ್.ರಾಜಣ್ಣ :– ಮಾನ್ಯ ಕಾನೂನು, ನ್ಯಾಯ, ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–